ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ
ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2019–20 ದಿನಾಂಕ: 13–02–2020

## ಪತ್ರಿಕಾ ಆಮಂತ್ರಣ

1. 2019ನೇ ಸಾಲಿನ ಕರ್ನಾಟಕ ರಾಜ್ಯ ಪೊಲೀಸ್ ವಾರ್ಷಿಕ ಕ್ರೀಡಾಕೂಟದ ಉದ್ಘಾಟನಾ ಸಮಾರಂಭ:

**ಉದ್ಘಾಟನೆ:**

ಶ್ರೀಮತಿ ನೀಲಮಣಿ ಎನ್. ರಾಜು, ಐ.ಪಿ.ಎಸ್ (ನಿ)
ನಿವೃತ್ತ ಮಹಾ ನಿರ್ದೇಶಕರು ಮತ್ತು ಪೊಲೀಸ್ ಮಹಾ ನಿರೀಕ್ಷಕರು, ಕರ್ನಾಟಕ ರಾಜ್ಯ

**ದಿನಾಂಕ : 14–02–2020,** ಶುಕ್ರವಾರ, ಸಮಯ : **ಬೆಳಿಗ್ಗೆ 9–00 ಗಂಟೆಗೆ**
ಸ್ಥಳ: ಕೆ.ಎಸ್.ಆರ್.ಪಿ. ಕ್ರೀಡಾಂಗಣ, ಕೋರಮಂಗಲ, ಬೆಂಗಳೂರು.

**2. ಪತ್ರಿಕಾಗೋಷ್ಠಿ:**

ರಾಷ್ಟ್ರೀಯ ಪರಿಶಿಷ್ಟ ಜಾತಿಗಳ ಆಯೋಗ ನಡೆಸುವ ರಾಜ್ಯ ಮಟ್ಟದ ಪ್ರಗತಿ ಪರಿಶೀಲನಾ ಸಭೆಯ ನಂತರ:

**ದಿನಾಂಕ: 14–02–2020** ಶುಕ್ರವಾರ, ಸಮಯ : **ಮಧ್ಯಾಹ 3–00 ಗಂಟೆಗೆ**

ಸ್ಥಳ: ಕೊಠಡಿ ಸಂಖ್ಯೆ 334, ಸಮ್ಮೇಳನ ಸಭಾಂಗಣ, 3ನೇ ಮಹಡಿ, ವಿಧಾನಸೌಧ, ಬೆಂಗಳೂರು.

PRESS NOTE

# Penalty collected from ticketless passengers

Bengaluru, Feb 13 (Karnataka Information)

The Checking staffs of Bangalore Metropolitan Transport Corporation has intensified checking of buses operated in and around Bangalore City to detect ticketless travelling by the passengers. During the Month of January-2020 they have checked 19887 trips and penalized 5898 ticketless passengers by collecting Rs. 10,51,200/- as penalty and booked 2980 cases against conductor's for their dereliction of duty.

During the afore said period the Checking Staff have penalized 334 male passengers occupying seats exclusively reserved for lady passengers &imposed fine of Rs. 33,400/- in accordance with KMV Rules 94 r/w section 177 of MV Act 1988.

During the Month of January-2020 overall they have collected of Rs.10,84,600/- penalty from 6232 penalized passengers. Passengers are advised to purchase tickets / pass and travel - this will not only avoid levy of penalty / embarrassment but will also help BMTC to give better services to all commuters. Please allow the female passengers to occupy the seats exclusively reserved for them.

ಪತ್ರಿಕಾ ಪ್ರಕಟಣೆ

# ಟಿಕೆಟ್ ರಹಿತ ಪ್ರಯಾಣಿಕರಿಂದ ದಂಡ ವಸೂಲಿ

ಬೆಂಗಳೂರು, ಫೆಬ್ರವರಿ 13 (ಕರ್ನಾಟಕ ವಾರ್ತೆ)

ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆ ವಾಹನಗಳಲ್ಲಿ ಸಂಚರಿಸುವ ಪ್ರಯಾಣಿಕರು ಟಿಕೇಟನ್ನು ಪಡೆಯದೆ ಅನಧಿಕೃತವಾಗಿ ಪ್ರಯಾಣ ಮಾಡುವವರನ್ನು ಮತ್ತು ಸಂಸ್ಥೆಯ ಸಾರಿಗೆ ಆದಾಯದ ಸೋರಿಕೆಯನ್ನು ತಡೆಗಟ್ಟುವ ನಿಟ್ಟಿನಲ್ಲಿ, ನಗರದಾದ್ಯಂತ ಸಂಚರಿಸುವ ವಾಹನಗಳನ್ನು ನಮ್ಮ ಸಂಸ್ಥೆಯ ತನಿಖಾ ತಂಡಗಳು ಜನವರಿ-2020 ರ ಮಾಹೆಯಲ್ಲಿ ಒಟ್ಟು 19887 ಟ್ರಿಪ್‌ಗಳನ್ನು ತಪಾಸಣೆ ನಡೆಸಿ, 5898 ಟಿಕೆಟ್ ರಹಿತ ಪ್ರಯಾಣಿಕರನ್ನು ಪತ್ತೆಹಚ್ಚಿ, ಅವರಿಂದ ಒಟ್ಟು ರೂ.10,51,200/- ದಂಡ ವಸೂಲಿ ಮಾಡಿ ಸಂಸ್ಥೆಯ ನಿರ್ವಾಹಕರುಗಳ ವಿರುದ್ಧ 2980 ಪ್ರಕರಣಗಳನ್ನು ದಾಖಲಿಸಿರುತ್ತಾರೆ.

ಮಹಿಳಾ ಪ್ರಯಾಣಿಕರಿಗೆಂದೇ ಮೀಸಲಾಗಿರುವ ಆಸನಗಳಲ್ಲಿ ಕುಳಿತು ಪ್ರಯಾಣಿಸಿರುವ 334 ಪುರುಷ ಪ್ರಯಾಣಿಕರಿಂದ ಒಟ್ಟು ರೂ. 33,400/- ಗಳನ್ನು ಮೋಟಾರು ವಾಹನ ಕಾಯ್ದೆ 1988 ಕಲಂ 177 ಮತ್ತು 94 ರ ಪ್ರಕಾರ ದಂಡ ವಿಧಿಸಲಾಗಿರುತ್ತದೆ.

ಒಟ್ಟಾರೆಯಾಗಿ ಜನವರಿ-2020 ರ ಮಾಹೆಯಲ್ಲಿ 6232 ಪ್ರಯಾಣಿಕರಿಂದ ಒಟ್ಟು ರೂ. 10,84,600/- ದಂಡವನ್ನು ವಸೂಲಿಮಾಡಲಾಗಿದೆ.

ಪ್ರಯಾಣಿಕರು ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆಯ ವಾಹನಗಳಲ್ಲಿ ಪ್ರಯಾಣಿಸುವಾಗ ಅಧಿಕೃತ ಟಿಕೇಟ್/ ದಿನದ ಪಾಸು / ಮಾಸಿಕ ಪಾಸುಗಳನ್ನು ಹೊಂದಿ ಪ್ರಯಾಣಿಸುವುದು. ಇದರಿಂದ ಅನಗತ್ಯ ದಂಡ ಕಟ್ಟುವುದನ್ನು ತಡೆಯಬಹುದಾಗಿದೆ ಹಾಗೂ ಇಂತಹ ಪ್ರವೃತ್ತಿಯಿಂದ ಸಂಸ್ಥೆಯು ಉತ್ತಮ ಸೇವೆಯನ್ನು ಪ್ರಯಾಣಿಕರಿಗೆ ನೀಡಲು ಸಹಾಯವಾಗುತ್ತದೆ. ಮಹಿಳಾ ಪ್ರಯಾಣಿಕರಿಗೆಂದೇ ಮೀಸಲಾಗಿರುವ ಆಸನಗಳಲ್ಲಿ ಪುರುಷ ಪ್ರಯಾಣಿಕರು ಆಸನಗಳನ್ನು ತೆರವು ಮಾಡಿಕೊಡುವ ಮೂಲಕ ಅವರಿಗೆ ಕುಳಿತುಕೊಳ್ಳಲು ಅವಕಾಶ ನೀಡಬೇಕೆಂದು ಕೋರಲಾಗಿದೆ.

ಹೆಚ್ಚಿನ ವಿವರಗಳಿಗೆ ವೆಬ್‌ಸೈಟ್: www.mybmtc.co ಇ-ಮೇಲ್: pro@mybmtc.com ದೂ : 080- 22537295 ಟೋಲ್.ಫ್ರಿ : 18004251663 ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆ ಕೇಂದ್ರ ಕಛೇರಿ : : ಸಾರ್ವಜನಿಕ ಸಂಪರ್ಕ ಇಲಾಖೆ : : ಬೆಂಗಳೂರು-27 ಕೇಂದ್ರ ಕಛೇರಿ, ಸಾರ್ವಜನಿಕ ಸಂಪರ್ಕ ಇಲಾಖೆ, ಶಾಂತಿನಗರ ಟಿ.ಟಿ.ಎಂ.ಸಿ, ಬೆಂಗಳೂರು – 560 027 ಇವರನ್ನು ಸಂಪರ್ಕಿಸಬಹುದಾಗಿದೆ

# ಬಿಸಿಯೂಟ ನೌಕರರ ಬೇಡಿಕೆ: ಕೇಂದ್ರಕ್ಕೆ ಸದ್ಯದಲ್ಲೇ ನಿಯೋಗ

## -ಸುರೇಶ್ ಕುಮಾರ್

ಬೆಂಗಳೂರು, ಫೆಬ್ರವರಿ 13 (ಕರ್ನಾಟಕ ವಾರ್ತೆ)

ಬಿಸಿಯೂಟ ನೌಕರರ ಸಂಭಾವನೆಯ ಕೇಂದ್ರದ ಪಾಲನ್ನು ಹೆಚ್ಚಿಸುವುದರ ಕುರಿತಂತೆ ಕೇಂದ್ರ ಸರ್ಕಾರದ ಗಮನ ಸೆಳೆಯಲು ಸದ್ಯದಲ್ಲೇ ದೆಹಲಿಗೆ ನಿಯೋಗ ಕರೆದೊಯ್ಯಲಾಗುವುದು ಎಂದು ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವ ಎಸ್. ಸುರೇಶ್ ಕುಮಾರ್ ಹೇಳಿದ್ದಾರೆ.

ಶಿಕ್ಷಣ ಇಲಾಖೆಯ ಮಧ್ಯಾಹ್ನ ಉಪಹಾರ ಯೋಜನೆಯ ಬಿಸಿಯೂಟ ನೌಕರರ ಬೇಡಿಕೆಗಳ ಕುರಿತು ವಿವಿಧ ಬಿಸಿಯೂಟ ನೌಕರರ ಸಂಘಟನೆಗಳ ಪದಾಧಿಕಾರಿಗಳೊಂದಿಗೆ ಗುರುವಾರ ಸಮಗ್ರ ಶಿಕ್ಷಣ ಅಭಿಯಾನ ಸಭಾಂಗಣದಲ್ಲಿ ನಡೆದ ಸಭೆಯಲ್ಲಿ ಮಾತನಾಡಿದ ಸಚಿವರು, ಮಕ್ಕಳಿಗೆ ಬಿಸಿಯೂಟ ತಯಾರು ಮಾಡುವ ಸಿಬ್ಬಂದಿಗಳ ಅವರ ಬೇಡಿಕೆಗಳ ಕುರಿತಂತೆ ಸರ್ಕಾರ ಮುಕ್ತಮನಸ್ಸು ಹೊಂದಿದ್ದು, ಹಂತಹಂತವಾಗಿ ಈಡೇರಿಸಲು ಕ್ರಮ ಕೈಗೊಳ್ಳಲಾಗುವುದು ಎಂದರು.

ಮಧ್ಯಾಹ್ನ ಉಪಹಾರ ಯೋಜನೆ ನೌಕರರಿಗೆ ನಿವೃತ್ತಿ ನಂತರ ಒಂದಷ್ಟು ಮೊತ್ತದ ಹಣ ಬರುವಂತಾಗಲೂ ಹಾಗೆಯೇ ಅಪಘಾತ ವಿಮೆಯಂತಹ ಯೋಜನೆಯನ್ನು ಜಾರಿಗೊಳಿಸಲು ನೌಕರರ ಪ್ರೀಮಿಯಂ ಪಾವತಿಯೊಂದಿಗೆ ವಿಮೆ ಮಾಡುವ ಸಂಬಂಧದಲ್ಲಿ ಭಾರತೀಯ ಜೀವ ವಿಮಾ ನಿಗಮದೊಂದಿಗೆ ಚರ್ಚಿಸಿ ಸೂಕ್ತವೆನಿಸಬಹುದಾದ ನಿಟ್ಟಿನಲ್ಲಿ ಪರಿಶೀಲನೆ ಮಾಡಲಾಗುವುದು ಎಂದು ಅವರು ಹೇಳಿದರು.

ರಾಜ್ಯದ ಸರ್ಕಾರಿ ನೌಕರರರಿಗೆ ತುಟ್ಟಿಭತ್ಯೆ ಹೆಚ್ಚಳವಾದಾಗ ಗುತ್ತಿಗೆ ನೌಕರರಿಗೂ ಅದು ಅನ್ವಯವಾಗುವಂತೆ ತಮಿಳುನಾಡು ಸರ್ಕಾರ ಜಾರಿಗೊಳಿಸಿರುವ ನೀತಿಯನ್ನು ಅಧ್ಯಯನ ಮಾಡಿ ಆ ನಿಟ್ಟಿನಲ್ಲಿ ಬಿಸಿಯೂಟ ನೌಕರರಿಗೆ ಏನಾದರೂ ಸಹಾಯ ಮಾಡಲು ಸಾಧ್ಯವೇ ಎಂದು ಪರಿಶೀಲನೆ ನಡೆಸಲಾಗುವುದು ಎಂದೂ ಸುರೇಶ್ ಕುಮಾರ್ ತಿಳಿಸಿದರು. ಶಾಲೆಗಳಲ್ಲಿ ಡಿ.ಗ್ರೂಪ್ ನೌಕರರು ಇಲ್ಲವಾದ್ದರಿಂದ ಬಿಸಿಯೂಟ ನೌಕರರನ್ನೇ ಡಿ.ಗ್ರೂಪ್ ನೌಕರರನ್ನಾಗಿ ನೇಮಿಸಿಕೊಳ್ಳಬೇಕು ಹಾಗೂ ಸ್ಥಳಾವಕಾಶವಿರುವ ಶಾಲೆಗಳಲ್ಲಿ ತೋಟಗಾರಿಕೆ ಕೈಗೊಳ್ಳಲು ನರೇಗಾ ಯೋಜನೆಯಡಿ ಬಿಸಿಯೂಟ

ನೌಕರರನ್ನು ಬಳಸಿಕೊಳ್ಳಬೇಕು ಎಂಬ ಬೇಡಿಕೆಗಳ ಕುರಿತು ಸಂಬಂಧಿಸಿದವರೊಂದಿಗೆ ಚರ್ಚಿಸ ನಿರ್ಧಾರ ಕೈಗೊಳ್ಳಲಾಗುವುದು ಎಂದು ಸಚಿವರು ವಿವರಿಸಿದರು.

ಬಿಸಿಯೂಟ ನೌಕರರಿಂದ ಸಂಬಂಧಿಸಿದ ಶಾಲೆಯ ಮಕ್ಕಳಿಗೆ ಮಾತ್ರವೇ ಅಡುಗೆ ತಯಾರಿಸಬೇಕೆಂಬುದನ್ನು ಹೊರತು ಪಡಿಸಿದ ಯಾವುದೇ ಕೆಲಸಗಳನ್ನು ಬಿಸಿಯೂಟ ನೌಕರರಿಂದ ಮಾಡಿಸಿಕೊಳ್ಳಬಾರದೆಂದು ಕಟ್ಟುನಿಟ್ಟಿನ ಸುತ್ತೋಲೆ ಹೊರಡಿಸಲಾಗುವುದು. ಯಾವುದೇ ಶಾಲೆಯಲ್ಲಿ ಬಿಸಿಯೂಟ ತಯಾರು ಮಾಡುವುದನ್ನು ಹೊರತುಪಡಿಸಿ ಬೇರಾವುದೇ ಕೆಲಸ ಮಾಡಿಸಿದರೆ ಅಂತಹ ಶಾಲೆಗಳ ಮುಖ್ಯಸ್ಥರ ವಿರುದ್ಧ ಶಿಸ್ತು ಕ್ರಮ ಕೈಗೊಳ್ಳಲಾಗುವುದು ಎಂದು ಸಚಿವರು ವಿವರಿಸಿದರು.

## ***ನೇರ ಫೋನ್ ಇನ್ ಕಾರ್ಯಕ್ರಮ***

ಬೆಂಗಳೂರು, ಫೆಬ್ರವರಿ 13 (ಕರ್ನಾಟಕ ವಾರ್ತೆ)

ಬೆಂಗಳೂರು ಜಲಮಂಡಳಿಯು ಶನಿವಾರದಂದು ಬೆಳಿಗ್ಗೆ 09:00 ರಿಂದ 10:30 ರವರೆಗೆ ಮಂಡಳಿಯ ಮಾನ್ಯ ಅಧ್ಯಕ್ಷರೊಂದಿಗೆ ನೇರ ಫೋನ್–ಇನ್ ಕಾರ್ಯಕ್ರಮವನ್ನು ಆಯೋಜಿಸಿದೆ. ಈ ಸಂಬಂಧ **ದಿನಾಂಕ:15.02.2020 ರಂದು ಬೆಳಿಗ್ಗೆ 09:00 ರಿಂದ 10:30** ರವರೆಗೆ ನೇರ ಫೋನ್ ಇನ್ ಕಾರ್ಯಕ್ರಮವನ್ನು ಹಮ್ಮಿಕೊಂಡಿದ್ದು, ಸಾರ್ವಜನಿಕರು ತಮ್ಮ ವಲಯ/ಪ್ರದೇಶಗಳಲ್ಲಿನ ಕುಡಿಯುವ ನೀರಿನ ಸಮಸ್ಯೆ ಮತ್ತು ಒಳಚರಂಡಿ ಕೊಳವೆ/ಇಳಿ ಗುಂಡಿಯಿಂದ ತ್ಯಾಜ್ಯ ನೀರು ಹೊರಬರುತ್ತಿರುವ ಬಗ್ಗೆ, ಜಲಮಾಪನ ಹಾಗೂ ನೀರಿನ ಬಿಲ್ಲಿನ ಸಮಸ್ಯೆಯ ಬಗ್ಗೆ ನೇರವಾಗಿ ಮಾತನಾಡಿ ಕುಂದು–ಕೊರತೆಗಳನ್ನು ಬಗೆಹರಿಸಿಕೊಳ್ಳಲು ಈ ಫೋನ್–ಇನ್ ಕಾರ್ಯಕ್ರಮವನ್ನು ಸದುಪಯೋಗ ಪಡಿಸಿಕೊಳ್ಳಲು ಕೋರಲಾಗಿದೆ. ಸಾರ್ವಜನಿಕರು ಸಂಪರ್ಕಿಸಬಹುದಾದ ದೂರವಾಣಿ ಸಂಖ್ಯೆ; **080–22945119**.

**ನೀರಿನ ಸಂಪರ್ಕ ಹೊಂದಿರುವ ಗ್ರಾಹಕರು ತಮ್ಮ ಆರ್.ಆರ್.ಸಂಖ್ಯೆಯನ್ನು ತಿಳಿಸಿ ದೂರನ್ನು ನೀಡಲು ಕೋರಲಾಗಿದೆ**.

## **ಸಚಿವರ ಪ್ರವಾಸ**

ಬೆಂಗಳೂರು, ಫೆಬ್ರವರಿ 13 (ಕರ್ನಾಟಕ ವಾರ್ತೆ)

ವಸತಿ ಸಚಿವ ಹಾಗೂ ಮೈಸೂರು ಮತ್ತು ಮಡಿಕೇರಿ ಜಿಲ್ಲಾ ಉಸ್ತುವಾರಿ ಸಚಿವರೂ ಆದ ವಿ. ಸೋಮಣ್ಣ ಅವರು ಫೆಬ್ರವರಿ 15 ಮತ್ತು 16 ರಂದು ಕನಕಪುರ ಮತ್ತು ಮೈಸೂರು ಜಿಲ್ಲೆಯಲ್ಲಿ ಪ್ರವಾಸ ಕೈಗೊಂಡು, ಅದೇ ದಿನ ಕೇಂದ್ರಸ್ಥಾನಕ್ಕೆ ಹಿಂದಿರುಗಲಿದ್ದಾರೆ

# Phone in Program

Bengaluru, Feb 13, (Karnataka Information)

BWSSB is conducting a Phone-in program with Hon'ble Chairman BWSSB on Saturday from 09:00 am to 10:30 am on 15.02.2020 . So BWSSB is requesting the public to discuss and redressal the grievances concerned with the Water Billing, Manhole Overflowing, Meter Reading issues, Improper Water Supply and Sanitary issues. Public can contact through the phone number:080-22945119. It is requested to Consumers to give the R.R.Number details before raising complaint says official press release.